# ಕರ್ನಾಟಕ ವಿಧಾನ ಪರಿಷತ್ತು
## ನೂರ ಮೂವತ್ತನೆಯ ಅಧಿವೇಶನ
## ಕಾರ್ಯಕಲಾಪಗಳ ಪಟ್ಟಿ
**ಗುರುವಾರ, ದಿನಾಂಕ: 03ನೇ ಮಾರ್ಚ್, 2016**
**(ಸಮಯ: ಬೆಳಗ್ಗೆ 11.00 ಗಂಟೆಗೆ)**

******

### 01. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಶ್ರೀ ಸಿದ್ಧರಾಮಯ್ಯ** (ಮುಖ್ಯಮಂತ್ರಿಗಳು) ಅವರು:-

ಅ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 2014-15ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸು ಲೆಕ್ಕಗಳನ್ನು (ಭಾಗ-1 ಮತ್ತು ಭಾಗ-2) ಸಭೆಯ ಮುಂದಿಡುವುದು.

ಆ) ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಒಂದನೇ ಹಾಗೂ ಎರಡನೇ ಪಟ್ಟಿಯ ರೀತ್ಯಾ.

### 02. ಕಾರ್ಯದರ್ಶಿಯವರ ವರದಿ

**ಕಾರ್ಯದರ್ಶಿಯವರು: -**

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯಲ್ಲಿ ಮಂಡಿಸುವುದು.

### 03. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

**ಅ)** "2016ನೇ ಫೆಬ್ರವರಿ, 29ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು **ಡಾ: ವೀರಣ್ಣ ಮತ್ತಿಕಟ್ಟಿ** ಅವರು ಸೂಚಿಸುವುದು;

**ಆ) ಶ್ರೀ ಐವನ್ ಡಿ'ಸೋಜಾ** ಅವರು ಅನುಮೋದಿಸುವುದು.

### 04. ಪ್ರಶ್ನೋತ್ತರ

| | | | |
|---|---|---|---|
| ಅ. | **ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು** | : | **ಮೂರನೆಯ ಪಟ್ಟಿ** |
| ಆ. | **ವರ್ಗಾವಣೆಗೊಂಡ ಪ್ರಶ್ನೆಗಳು:**<br>1ನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ರಘುನಾಥ ರಾವ್ ಮಲ್ಕಾಪೂರೆ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 14(141) | : | **ಮಾನ್ಯ ನಗರಾಭಿವೃದ್ಧಿ ಸಚಿವರು** |
| ಇ. | **ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು** | : | **ಮೂರನೆಯ ಪಟ್ಟಿ** |

..2..

## ೦೫. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಬಸವರಾಜ ಹೊರಟ್ಟಿ** ಅವರು ಕರ್ನಾಟಕ ರಾಜ್ಯ ಕ್ರೀಡಾ ಪರಿಷತ್ತು ಹಾಗೂ ಕರ್ನಾಟಕ ಕ್ರೀಡಾ ಪ್ರಾಧಿಕಾರದಲ್ಲಿ ಅರೆಕಾಲಿಕ/ಗುತ್ತಿಗೆ ಆಧಾರದಲ್ಲಿ ನೇಮಕಗೊಂಡು ಕಾರ್ಯನಿರ್ವಹಿಸುತ್ತಿರುವ 91 ತರಬೇತುದಾರರನ್ನು ಖಾಯಂಗೊಳಿಸುವ ಕುರಿತು **ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ** ಸಚಿವರ ಗಮನ ಸೆಳಯುವುದು.

**ಆ) ಶ್ರೀಮತಿ ಮೋಟಮ್ಮ** ಅವರು ರಾಜ್ಯದ ತೋಟಗಾರಿಕೆ ಇಲಾಖೆಯ ಉಸ್ತುವಾರಿಯಲ್ಲಿರುವ ನಂದಿಗಿರಿಧಾಮದಲ್ಲಿ ಮೂಲಭೂತ ಸೌಕರ್ಯಗಳ ಕುರಿತು **ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ** ಸಚಿವರ ಗಮನ ಸೆಳೆಯುವುದು.

**ಇ) ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿನ ವಿವಿಧ ಗ್ರಾಮ ಪಂಚಾಯತ್‌ಗಳಲ್ಲಿ ಹತ್ತಾರು ವರ್ಷಗಳಿಂದ ಗ್ರಾಮೀಣಾಭಿವೃದ್ಧಿಗಾಗಿ ದುಡಿಯುತ್ತಿರುವ ಸಿಬ್ಬಂದಿಗಳಿಗೆ ವೇತನ ಹೆಚ್ಚಳ, ಇ.ಎಸ್.ಐ (ಆರೋಗ್ಯ), ಪಿ.ಎಫ್ (ಭವಿಷ್ಯ ನಿಧಿ), ರಜೆ ಸೌಲಭ್ಯ, ಹೆರಿಗೆ ಭತ್ಯೆ ಹಾಗೂ ಜೀವನ ಭದ್ರತೆ ಸೇರಿದಂತೆ ಇನ್ನಿತರ ಸೌಲಭ್ಯಗಳನ್ನು ಒದಗಿಸುವ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್** ಸಚಿವರ ಗಮನ ಸೆಳೆಯುವುದು.

## ೦೬. ನಿಯಮ ೩೩೦ರ ಮೇರೆಗೆ

**ಅ) ಕ್ಯಾಪ್ಟನ್ ಗಣೇಶ್ ಕಾರ್ಣಿಕ್** ಅವರು ದಕ್ಷಿಣ ಕನ್ನಡ ಜಿಲ್ಲೆಯ ಜೀವ ನದಿಗಳಾದ ನೇತ್ರಾವತಿ ಹಾಗೂ ಕುಮಾರಧಾರ ನದಿಯ ಉಪನದಿಯಾದ ಎತ್ತಿನ ಹೊಳೆಯ ನೀರನ್ನು ಚಿಕ್ಕಬಳ್ಳಾಪುರ, ಕೋಲಾರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸುವುದಕ್ಕಾಗಿ ಕೈಗೆತ್ತಿಕೊಂಡಿರುವ "ಎತ್ತಿನ ಹೊಳೆ" ಯೋಜನೆಯು ಅವೈಜ್ಞಾನಿಕವಾಗಿದ್ದು, ಇದರಿಂದಾಗಿ ಪರಿಸರದ ಮೇಲಾಗುವ ಪರಿಣಾಮಗಳು ಹಾಗೂ ಈ ಯೋಜನೆಯ ಟೆಂಡರ್ ಪ್ರಕ್ರಿಯೆಯಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು)**

**ಆ) ಶ್ರೀ ವಿ.ಎಸ್. ಉಗ್ರಪ್ಪ** ಅವರು ರಾಜ್ಯದಲ್ಲಿ ಸೋಲಾರ್ ವಿದ್ಯುಚ್ಛಕ್ತಿ ಉತ್ಪಾದನೆ ಮಾಡಲು ಇರುವ ಸಾಧಕ-ಬಾಧಕಗಳ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಇಂಧನ ಸಚಿವರು)**

**ವಿ. ಶ್ರೀಶ್**
**ಕಾರ್ಯದರ್ಶಿ**

---